ಯಾರು ನಮ್ಮ ಈ ವಿಷಯದಲ್ಲಿ (ಧರ್ಮದಲ್ಲಿ) ಅದರಲ್ಲಿಲ್ಲದನ್ನು ಹೊಸದಾಗಿ ಸೇರಿಸುತ್ತಾನೋ (ಆವಿಷ್ಕರಿಸುತ್ತಾನೋ), ಅದು ತಿರಸ್ಕೃತವಾಗಿದೆ

ಸತ್ಯವಿಶ್ವಾಸಿಗಳ ಮಾತೆ, ಉಮ್ಮು ಅಬ್ದುಲ್ಲಾ, ಆಯಿಷಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾರು ನಮ್ಮ ಈ ವಿಷಯದಲ್ಲಿ (ಧರ್ಮದಲ್ಲಿ) ಅದರಲ್ಲಿಲ್ಲದನ್ನು
ಹೊಸದಾಗಿ ಸೇರಿಸುತ್ತಾನೋ (ಆವಿಷ್ಕರಿಸುತ್ತಾನೋ), ಅದು ತಿರಸ್ಕೃತವಾಗಿದೆ." ಮುಸ್ಲಿಂರ ವರದಿಯಲ್ಲಿ ಹೀಗಿದೆ: "ಯಾರು ನಮ್ಮ ಆದೇಶವಿಲ್ಲದ ಒಂದು ಕಾರ್ಯವನ್ನು ಮಾಡುತ್ತಾನೋ, ಅದು ತಿರಸ್ಕೃತವಾಗಿದೆ".
[صحيح] [رواه البخاري ومسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಧರ್ಮದಲ್ಲಿ ಹೊಸದಾದ ಒಂದು ಕಾರ್ಯವನ್ನು ಯಾರಾದರೂ ಆವಿಷ್ಕರಿಸಿದರೆ, ಅಥವಾ ಕುರ್ಆನ್ ಮತ್ತು ಸುನ್ನತ್ನಲ್ಲಿ ಆಧಾರವಿಲ್ಲದ ಒಂದು ಕಾರ್ಯವನ್ನು ಮಾಡಿದರೆ, ಅದು ತಿರಸ್ಕೃತವಾಗಿದೆ. ಅಲ್ಲಾಹು ಅದನ್ನು ಸ್ವೀಕರಿಸುವುದಿಲ್ಲ.

http://www.sunnah.global/hadeeth/kn/show/66514